# ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.396/2024

## ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ನವೀನ್ ಕುಮಾರ್ | CW: 1 | PW: 1 |
| ತಂದೆಯ ಹೆಸರು | : | ಏಳುಮಲೈ | | |
| ವಯಸ್ಸು | : | 23 | | |
| ವೃತ್ತಿ | : | ವ್ಯವಸಾಯ | | |
| ವಾಸಸ್ಥಳ | : | ಚಿನ್ನಿಕಟ್ಟೆ | | |

ದಿನಾಂಕಃ 17.02.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

## ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಚಾಸಾ 4 ನನ್ನ ತಾಯಿ. ಚಾಸಾ 7 ರಿಂದ 9 ರವರು ಗೊತ್ತು. ಮೃತ ಏಳುಮಲೈ ನನ್ನ ತಂದೆ. 1 ನೇ ಆರೋಪಿ ಗೊತ್ತು. ನನ್ನ ತಂದೆ ಅಪಘಾತದಲ್ಲಿ ಮೃತ ಪಟ್ಟಿರುತ್ತಾರೆ ಆದರೆ ಅಪಘಾತ ಯಾವಾಗ ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಅಪಘಾತದ ಸಂಬಂಧ ನಾನು ಪೊಲೀಸರಿಗೆ ಯಾವುದೇ ದೂರು ನೀಡಿಲ್ಲ.

ಪೋಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ನಾನು ಸಹಿಯನ್ನು ಮಾಡಿರುತ್ತೇನೆ ಆದರೆ ಅದರಲ್ಲಿ ಏನು ಬರೆದಿದೆ ಎನ್ನುವ ವಿಚಾರ ನನಗೆ ಗೊತ್ತಿಲ್ಲ.

ಸಾಕ್ಷಿಯು ದೂರು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ದೂರನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

<u>ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-</u>

ದಿಃ 22.02.2024 ರಂದು ನಮ್ಮ ತಂದೆಯವರು ಕೆಎ 17 ಇಎಲ್ 8741 ಮೋಟಾರ್ ಸೈಕಲ್ ನಲ್ಲಿ ಚಾಲನೆ ಮಾಡಿಕೊಂಡು ಹೋಗಿದ್ದು, ಮಧ್ಯಾಹ್ನ 12 ರ ಸಮಯದಲ್ಲಿ ನಾನು ಮನೆಯಲ್ಲಿರುವಾಗ ನಮ್ಮ ಗ್ರಾಮದ ಚಾಸಾ 7 ಮತ್ತು 8 ರವರು ನನಗೆ ಫೋನ್ ಮಾಡಿ ನಿಮ್ಮ ತಂದೆಗೆ ಚಿನ್ನಿಕಟ್ಟೆ ಗ್ರಾಮದಿಂದ ತಮಿಳು ಕಾಲೇನಿಗೆ ಬರುವ ಶಿಕಾರಿಪುರ ಸವಳಂಗ ಮುಖ್ಯರಸ್ತೆಯಲ್ಲಿ ಕಾರು ಮತ್ತು ಮೋಟಾರ್ ಸೈಕಲ್ ಮಧ್ಯೆ ಅಪಘಾತವಾಗಿರುತ್ತದೆ ಎಂದು ನನಗೆ ತಿಳಿಸಿದರು ಂದರೆ ಸರಿಯಲ್ಲ. ನಂತರ ನಾನು ಕೂಡಲೇ ಅಪಘಾತ ನಡೆದ ಸ್ಥಳಕ್ಕೆ ಹೋಗಿ ನೋಡಿದಾಗ ಅಲ್ಲಿ ನಮ್ಮ ತಂದೆ ಯವರು ಬೈಕ್ ಸಮೇತ ಕೆಳಗೆ ಬಿದ್ದಿದ್ದರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ನಮ್ಮ ತಂದೆಗೆ ತಲೆಗೆ , ಕೈಕಾಲುಗಳಿಗೆ ತೀವ್ರ ಸ್ವರೂಪದ ಪೆಟ್ಟು ಬಿದ್ದು ಗಾಯಗಳಾಗಿರುತ್ತದೆ ಎಂದರೆಸರಿಯಲ್ಲ. ನಂತರ ಅಪಘಾತದ ಬಗ್ಗೆ ಚಾಸಾ 7 ರವರನ್ನು ವಿಚಾರಿಸಿದಾಗ ನಿಮ್ಮ ತಂದೆಯವರು ಮದ್ಯಾಹ್ನ 12.45 ರ ಸಮಯದಲ್ಲಿ ಮೋಟಾರ್ ಸೈಕಲ್ ನ್ನು ಸವಳಂಗ ಕಡೆಯಿಂದ ನಮ್ಮ ಗ್ರಾಮದ ಕಡೆ ಬಂದು ನಮ್ಮ ಗ್ರಾಮದ ತಮಿಳು ಕಾಲೋನಿ ಕಡೆ ಹೋಗಲು ಮೋಟಾರ್ ಸೈಕಲ್ ನ್ನು ಬಲಭಾಗದ ಇಂಡಿಕೇಟರ್ ಲೈಟ್ ಹಾಕಿಕೊಂಡು ಕೈ ಸನ್ನೆ ಮಾಡುತ್ತಾ ಬಲಭಾಗಕ್ಕೆ ತಿರುಗಿಸಿಕೊಂಡು ಹೋಗುತ್ತಿದ್ದಾಗ ಶಿಕಾರಿಪುರದಿಂದ ಸವಳಂಗದ ಕಡೆಗೆ ಒಬ್ಬ ಕಾರಿನ ಚಾಲಕ ತನ್ನ ಕಾರನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಕಾರಿನ ನಿಯಂತ್ರಣ ತಪ್ಪಿ ನಮ್ಮ ತಂದೆಯವರು ಚಾಲನೆ ಮಾಡುತ್ತಿದ್ದ ಬೈಕ್ ಗೆ ಡಿಕ್ಕಿಪಡಿಸಿದ್ದರಿಂದ ಬೈಕಿನ ಸಮೇತ ಕೆಳಗೆ ಬಿದ್ದು ಗಾಯಗಳಾಗಿರುತ್ತದೆ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಅಪಘಾತ ಪಡಿಸಿದ ಕಾರ್ ನಂಬರ್ ಕೆಎ 14 ಬಿ 8467 ಹಾಗೂ ಅದರ ಚಾಲಕನ ಹೆಸರು ರಾಘವೇಂದ್ರ ಎಂದು ನನಗೆ ತಿಳಿಯಿತು ಎಂದರೆ ಸರಿಯಲ್ಲ. ನಂತರ ನಮ್ಮ ತಂದೆಯನ್ನು 108 ಆ್ಯಂಬುಲೆನ್ಸ್ ನಲ್ಲಿ ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿದ್ದು ನಮ್ಮ ತಂದೆಯು ಒಳರೋಗಿಯಾಗಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಕಿತ್ಸೆ ಫಲಕಾರಿಯಾಗದೇ ಅದೇ ದಿನ ಮಧಾಹ್ನ 2.30 ಕ್ಕೆ ಮೃತಪಟ್ಟಿರುತ್ತಾರೆ ಎಂದರೆ ಸರಿ ಆದರೆ ಅಪಘಾತ ಹೇಗೆ ಮತ್ತು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ ಎಂದು ನುಡಿಯತ್ತಾರೆ. ಅಪಘಾತಕ್ಕೆ ಸಂಬಂಧಿಸಿದ ನಿಪಿ 1 ರಂತೆ ಪೋಲೀಸರಿಗೆ ದೂರು ನೀಡಿರುತ್ತಾರೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ– ಆರೋಪಿ ಪರ ವಕೀಲರಿಂದಃ–

ಆರೋಪಿ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.